I/287623/2022

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ:ಡಿಟಿಇ/58 /ಸಿಡಿಸಿ(2)/2022

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ,
ಬೆಂಗಳೂರು-560001, ದಿನಾಂಕ:18/07/2022.

-: **ಹಿಂಬರಹ** :-

ಸರ್ಕಾರದ ಪತ್ರ ಸಂಖ್ಯೆ:ಇಡಿ / 43 / ಟಿಪಿಇ / 2021 ದಿನಾಂಕ:14-07-2022ರಲ್ಲಿ ಅನುದಾನಿತ ಪಾಲಿಟೆಕ್ನಿಕ್/ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರುಗಳನ್ನು ಉನ್ನತ ವ್ಯಾಸಂಗಕ್ಕೆ ನಿಯೋಜಿಸುವ ಕುರಿತಂತೆ ನಿರ್ದೇಶನ ನೀಡಿದ್ದು, ಸದರಿ ಸರ್ಕಾರದ ಪತ್ರವನ್ನು ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ರವಾನಿಸಲಾಗಿದೆ.

**ಜಂಟಿ ನಿರ್ದೇಶಕರು(ಸಿಡಿಸಿ)**

**ಇವರಿಗೆ:-** ಎಲ್ಲಾ ಅನುದಾನಿತ ಪಾಲಿಟೆಕ್ನಿಕ್/ಇಂಜಿನಿಯರಿಂಗ್ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ – ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.

ಪ್ರತಿ: 1. ಇ-ಆಡಳಿತ ವಿಭಾಗಕ್ಕೆ - ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು

2. ಕಡತಕ್ಕೆ

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 43 ಟಿಪಿಇ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ, 2ನೇ ಗೇಟ್, 6ನೇ ಮಹಡಿ,
ಬೆಂಗಳೂರು, ದಿನಾಂಕ:14/07/2022

**ಇಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು 560 001.

JD-CDC
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಆವ್ಹ ಶಾಖೆ.
ಸಂಖ್ಯೆ 614
ದಿನಾಂಕ 15 JUL 2022

4422312/22

**ಇವರಿಗೆ:**

ಆಯುಕ್ತರು,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು.

ಮಾನ್ಯರೆ,

ವಿಷಯ:-ಅನುದಾನಿತ ಪಾಲಿಟೆಕ್ನಿಕ್ ಹಾಗೂ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರುಗಳನ್ನು ಉನ್ನತ ವ್ಯಾಸಂಗಕ್ಕೆ ನಿಯೋಜಿಸುವ ಬಗ್ಗೆ.

CDC(2)
16/7/2022

ಉಲ್ಲೇಖ:
1. ತಮ್ಮ ಪತ್ರ ಸಂಖ್ಯೆ:ಡಿಟಿಇ/58/ಸಿಡಿಸಿ(2)/2021/110, ದಿನಾಂಕ: 29.04.2022.
2. ತಮ್ಮ ಪತ್ರ ಸಂಖ್ಯೆ:ಡಿಟಿಇ/58/ಸಿಡಿಸಿ(2)/2021-22/404, ದಿನಾಂಕ: 23.08.2022.
3. ಆಯುಕ್ತಾಲಯದ ಕಡತ ಸಂಖ್ಯೆ:DTE-CDC0CDC2/ 58/2021.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರಗಳು ಮತ್ತು ಕಡತದಲ್ಲಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ಅಭಿಪ್ರಾಯದೊಂದಿಗೆ ಪರಿಶೀಲಿಸಲಾಯಿತು. ಸರ್ಕಾರದ ಸಾಮಾನ್ಯ ನೀತಿಯಡಿಯಲ್ಲಿ ಸೇವಾನಿರತ ಕೋಟಾದಡಿ ಆಯ್ಕೆಗೊಂಡು ಉನ್ನತ ವ್ಯಾಸಂಗಕ್ಕೆ ನಿಯೋಜಿಸಲ್ಪಟ್ಟ ಉಪನ್ಯಾಸಕರಿಗೆ ಮಾತ್ರ ವ್ಯಾಸಂಗದ ಅವಧಿಗೆ ವೇತನ ಮತ್ತು ಭತ್ಯೆಗಳನ್ನು ಮಂಜೂರು ಮಾಡಲು ಅವಕಾಶವಿರುತ್ತದೆ. ಅನುದಾನಿತ ಪಾಲಿಟೆಕ್ನಿಕ್/ಇಂಜಿನಿಯರಿಂಗ್ ಕಾಲೇಜುಗಳ ಉಪನ್ಯಾಸಕರಿಗಾಗಿ ಯಾವುದೇ ಸಾಮಾನ್ಯ ನೀತಿಯು ಚಾಲ್ತಿಯಲ್ಲಿ ಇಲ್ಲದಿದ್ದ ಸಂದರ್ಭದಲ್ಲಿ ಇಂತಹ ನಿಯೋಜನೆಗೆ ಅವಕಾಶವಿಲ್ಲ. ಮುಂದುವರೆದು, ಅನುದಾನಿತ ಕಾಲೇಜುಗಳ ಉಪನ್ಯಾಸಕರು ಅವರ ಹಕ್ಕಿನಲ್ಲಿರುವ ರಜೆಯ ಮೇರೆಗೆ ಮತ್ತು ರಜೆ ಲಭ್ಯವಿಲ್ಲದಿದ್ದ ಪಕ್ಷದಲ್ಲಿ ಅಸಾಧಾರಣ ರಜೆಯ ಮೇರೆಗೆ ಮಾತ್ರ ಉನ್ನತ ವ್ಯಾಸಂಗಕ್ಕೆ ತೆರಳಲು ಅವಕಾಶವಿರುತ್ತದೆ. ಈ ಅವಧಿಯಲ್ಲಿ ಅವರಿಗೆ ಯಾವುದೇ ವೇತನವನ್ನು ಪಾವತಿಸಲು ಅವಕಾಶವಿಲ್ಲವೆಂದು ತಮಗೆ ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ನಂ. 654
16/07/22

ತಮ್ಮ ನಂಬುಗೆಯ,
A.C. Madhu 14/7/22
(ಮಧು.ಎ.ಸಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ).